**All India Radio: Bangalore**
**National Bulletin In Kannada**
**15.06.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.06.2026  07.35 a.m.**

**<><><><>**

ಮುಖ್ಯಾಂಶಗಳು

1. ಸ್ಲೋವಾಕಿಯಾ ಅಧ್ಯಕ್ಷರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ಫ್ರಾನ್ಸ್‌ನ ಎವಿಯನ್‌ನಲ್ಲಿ ಇಂದಿನಿಂದ ಜಿ-೭ ಶೃಂಗಸಭೆ ಆರಂಭ
3. ಹಾರ್ಮುಜ್ ಜಲಸಂಧಿ ಮುಕ್ತಗೊಳಿಸಲು ಅಮೆರಿಕ-ಇರಾನ್ ನಡುವೆ ಒಪ್ಪಂದ ಅಂತಿಮ
4. ಶಾಸಕರ ಸಹಿ ನಕಲು ಪ್ರಕರಣ; ಸಿಐಡಿಯಿಂದ ಟಿಎಂಸಿ ಸಂಸದ ಅಭಿಷೇಕ್ ಬ್ಯಾನರ್ಜಿ ವಿಚಾರಣೆ
5. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್: ಪಾಕಿಸ್ತಾನ ವಿರುದ್ಧ ಭಾರತ ತಂಡಕ್ಕೆ ಭರ್ಜರಿ ಜಯ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸ್ಲೋವಾಕಿಯಾದ ರಾಜಧಾನಿ ಬ್ರಾಟಿಸ್ಲಾವಾದಲ್ಲಿ ಸ್ಲೋವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ಫ್ರಾನ್ಸ್‌ನ ನೈಸ್‌ಗೆ ಭೇಟಿ ನೀಡಿದ ನಂತರ ಪ್ರಧಾನಿ ಮೋದಿ ಅವರು ಎರಡು ದಿನಗಳ ಅಧಿಕೃತ ಭೇಟಿಗಾಗಿ ನಿನ್ನೆ ರಾತ್ರಿ ಸ್ಲೋವಾಕಿಯಾಕ್ಕೆ ಆಗಮಿಸಿದರು. ಈ ಭೇಟಿಯು ಭಾರತ-ಸ್ಲೋವಾಕಿಯಾ ಸಂಬಂಧಗಳನ್ನು ಗಾಢವಾಗಿಸಲು ಮತ್ತು ಎರಡೂ ದೇಶಗಳ ನಡುವಿನ ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸಲು ಅವಕಾಶವನ್ನು ಒದಗಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಮತ್ತು ಪ್ರಧಾನಿ ರಾಬರ್ಟ್ ಫಿಕೊ ಅವರೊಂದಿಗೆ ಉತ್ಪಾದಕ ಸಭೆಗಳನ್ನು ಎದುರು ನೋಡುತ್ತಿರುವುದಾಗಿ ಅವರು ತಿಳಿಸಿದ್ದಾರೆ. ೧೯೯೩ ರಲ್ಲಿ ಸ್ವಾತಂತ್ರ್ಯ ಪಡೆದ ನಂತರ

ಭಾರತದ ಪ್ರಧಾನಿಯೊಬ್ಬರು ಸ್ಲೋವಾಕಿಯಾಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲು. ೨೦೨೫ ರ ಏಪ್ರಿಲ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಸ್ಲೋವಾಕಿಯಾ ಭೇಟಿ ಮತ್ತು ೨೦೨೬ರ ಫೆಬ್ರವರಿಯಲ್ಲಿ ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರ ಎಐ ಇಂಪ್ಯಾಕ್ಟ್ ಶೃಂಗಸಭೆಗಾಗಿ ಭಾರತಕ್ಕೆ ಭೇಟಿ ನೀಡಿದ್ದರು. ವ್ಯಾಪಾರ, ಹೂಡಿಕೆ, ಆಟೋಮೊಬೈಲ್ ಮತ್ತು ರೈಲ್ವೆ ಉತ್ಪಾದನೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸ್ಲೋವಾಕಿಯಾದೊಂದಿಗೆ ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸುವ ಕಡೆಗೆ ಭಾರತದ ಬದ್ಧತೆಯನ್ನು ಈ ಭೇಟಿ ಪುನರುಚ್ಚರಿಸುತ್ತದೆ. ಬ್ರಾಟಿಸ್ಲಾವಾಕ್ಕೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಲ್ಲಿನ ಭಾರತೀಯ ಸಮುದಾಯ ಆತ್ಮೀಯವಾಗಿ ಬರಮಾಡಿಕೊಂಡಿತು.

<><><>

ಪ್ರಧಾನಿ ನರೇಂದ್ರ ಮೋದಿ ಅವರ ಫ್ರಾನ್ಸ್ ಭೇಟಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗಿನ ಚರ್ಚೆಗಳ ಫಲಿತಾಂಶಗಳ ಕುರಿತು ವಿದೇಶಾಂಗ ಸಚಿವಾಲಯ ನೈಸ್‌ನಲ್ಲಿ ವಿಶೇಷ ಸಂಕ್ಷಿಪ್ತ ವಿವರಣೆಯನ್ನು ನೀಡಿದೆ. ಈ ಕುರಿತು ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಭಾರತ-ಫ್ರಾನ್ಸ್ ನಾವೀನ್ಯತೆ ಮಾರ್ಗಸೂಚಿ ೨೦೩೦ ಭೇಟಿಯ ಪ್ರಮುಖ ಅಂಶವಾಗಿದೆ. ಇದು ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳು, ಕೃತಕ ಬುದ್ಧಿಮತ್ತೆ, ಸ್ಟಾರ್ಟ್‌ಅಪ್‌ಗಳು, ಸಂಶೋಧನೆ ಮತ್ತು ಶೈಕ್ಷಣಿಕ ವಿನಿಮಯಗಳಲ್ಲಿ ಸಹಯೋಗವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದರು. ಎಐ ಆಡಳಿತದ ಕುರಿತು ಜಂಟಿ ಭಾರತ-ಫ್ರಾನ್ಸ್ ಎಐ ಕಾರ್ಯಪಡೆಯ ರಚನೆ ಮತ್ತು ಎನ್‌ಎಸ್‌ಟಿಐ ಕಾನ್ಪುರದಲ್ಲಿ ಏರೋನಾಟಿಕ್ಸ್ ಹಾಗೂ ವಿವಿಧ ವಲಯಗಳಲ್ಲಿ ಕೌಶಲ್ಯಕ್ಕಾಗಿ ರಾಷ್ಟ್ರೀಯ ಶ್ರೇಷ್ಠತೆಯ ಕೇಂದ್ರವನ್ನು ಸ್ಥಾಪಿಸಲಾಗುವುದು ಎಂದು ಅವರು ತಿಳಿಸಿದರು.

<><><>

೫೨ ನೇ ಜಿ-೭ ಶೃಂಗಸಭೆ ಇಂದು ಫ್ರಾನ್ಸ್‌ನ ಎವಿಯನ್‌ನಲ್ಲಿ ಆರಂಭವಾಗಲಿದೆ. ಮೂರು ದಿನಗಳ ಈ ಶೃಂಗಸಭೆಯಲ್ಲಿ ಜಿ-೭ ಸದಸ್ಯ ರಾಷ್ಟ್ರಗಳಾದ - ಕೆನಡಾ, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ಯುಕೆ, ಅಮೆರಿಕ ಮತ್ತು ಐರೋಪ್ಯ ಒಕ್ಕೂಟ ಭಾಗವಹಿಸುತ್ತಿವೆ. ಸದಸ್ಯರ ಜೊತೆಗೆ, ಭಾರತ, ಬ್ರೆಜಿಲ್, ಈಜಿಪ್ಟ್, ಕೀನ್ಯಾ, ದಕ್ಷಿಣ ಕೊರಿಯಾ, ಕತಾರ್, ಸೌದಿ ಅರೇಬಿಯಾ, ಸಿರಿಯಾ, ಯುಎಇ ಮತ್ತು ಉಕ್ರೇನ್ ಅನ್ನು 'ಔಟ್ರೀಚ್ ಪಾಲುದಾರ ರಾಷ್ಟ್ರಗಳು' ಎಂದು ಫ್ರಾನ್ಸ್ ಆಹ್ವಾನಿಸಿದೆ. ಭಾರತ

'ಪಾಲುದಾರ ರಾಷ್ಟ್ರ'ವಾಗಿ ಜಿ-೭ ಶೃಂಗಸಭೆಯಲ್ಲಿ ಭಾಗವಹಿಸುತ್ತಿರುವುದು ಇದು ೧೩ ನೇ ಬಾರಿ. ಪ್ರಧಾನಿ ನರೇಂದ್ರ ಮೋದಿ ನಾಳೆ ಔಟ್ರೀಚ್ ಅಧಿವೇಶನಗಳಲ್ಲಿ ಭಾಗವಹಿಸಲಿದ್ದಾರೆ. ಜಿ-೭ ಶೃಂಗಸಭೆಯಲ್ಲಿ ಪ್ರಧಾನಿ ಮೋದಿ ಭಾಗವಹಿಸುವುದು ಜಾಗತಿಕ ಭೌಗೋಳಿಕ ರಾಜಕೀಯದಲ್ಲಿ ಭಾರತದ ಪ್ರಮುಖ ಪಾತ್ರವನ್ನು ಒತ್ತಿಹೇಳುತ್ತದೆ. ಭಾರತ ಪ್ರಮುಖ ಆರ್ಥಿಕ ಶಕ್ತಿ ಕೇಂದ್ರವಾಗಿ, ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ರಾಜತಾಂತ್ರಿಕ ಸೇತುವೆಯಾಗಿ ಮತ್ತು ಇಂಡೋ-ಪೆಸಿಫಿಕ್‌ನಲ್ಲಿ ಕಾರ್ಯತಂತ್ರದ ಆಧಾರವಾಗಿ ಜಿ-೭ ಒಕ್ಕೂಟಕ್ಕೆ ಮುಖ್ಯವಾಗಿದೆ. ಇನ್ನೊಂದೆಡೆ, ಜಿ-೭ ಶೃಂಗಸಭೆಯಲ್ಲಿ ಭಾಗವಹಿಸುವಿಕೆಯು ಭಾರತ, ಜಾಗತಿಕ ದಕ್ಷಿಣದ ಹಿತಾಸಕ್ತಿಗಳನ್ನು ಪ್ರತಿಪಾದಿಸಲು, ಸುಧಾರಿತ ತಂತ್ರಜ್ಞಾನಗಳಿಗೆ ಸುರಕ್ಷಿತ ಪ್ರವೇಶವನ್ನು ಪಡೆಯಲು ಮತ್ತು ಕಾರ್ಯತಂತ್ರದ ಪಾಲುದಾರಿಕೆಗಳನ್ನು ಬಲಪಡಿಸಲು ಅನುವು ಮಾಡಿಕೊಡುತ್ತದೆ. ಜಗತ್ತು ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು, ಆರ್ಥಿಕ ಅನಿಶ್ಚಿತತೆ ಮತ್ತು ಹೊಸ ತಂತ್ರಜ್ಞಾನಗಳ ತ್ವರಿತ ವಿಕಸನದೊಂದಿಗೆ ಸೆಣಸಾಡುತ್ತಿರುವ ಸಮಯದಲ್ಲಿ ಈ ಶೃಂಗಸಭೆ ನಡೆಯುತ್ತಿದೆ.

<><><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ಪದವಿಪೂರ್ವ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ನೀಟ್ ಯುಜಿ ಮರು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಬಿಡುಗಡೆ ಮಾಡಿದೆ. ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರಗಳನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಅಧಿಕೃತ ವೆಬ್‌ಸೈಟ್ neet.nta.nic.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಮರು ಪರೀಕ್ಷೆಯು ಈ ತಿಂಗಳ ೨೧ ರಂದು ಮಧ್ಯಾಹ್ನ ೨ ಗಂಟೆಯಿಂದ ಸಂಜೆ ೫:೧೫ ರವರೆಗೆ ನಡೆಯಲಿದೆ.

<><><><>

ಅಮೆರಿಕ ಮತ್ತು ಇರಾನ್ ತಮ್ಮ ೧೦೭ ದಿನಗಳ ಯುದ್ಧವನ್ನು ಕೊನೆಗೊಳಿಸಲು ಮತ್ತು ಜಾಗತಿಕ ತೈಲ ಪೂರೈಕೆಯ ಐದನೇ ಒಂದು ಭಾಗವನ್ನು ಸಾಗಿಸಲು ಬಳಸಲಾಗುತ್ತಿದ್ದ ಕಿರಿದಾದ ಜಲಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ತೆರೆಯಲು ಒಪ್ಪಂದವನ್ನು ಅಂತಿಮಗೊಳಿಸಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿನ್ನೆ ರಾತ್ರಿ ಈ ಕುರಿತು ಘೋಷಣೆ ಮಾಡಿದರು. ಇರಾನಿನ ಬಂದರುಗಳ ಮೇಲಿನ ನೌಕಾ ದಿಗ್ಬಂಧನವನ್ನು ಅಮೆರಿಕ ಕೊನೆಗೊಳಿಸಲಿದೆ ಎಂದು ಹೇಳಿದರು. ಜೂನ್ ೧೯ ರಂದು ಸ್ವಿಟ್ಜರ್ಲೆಂಡ್‌ನಲ್ಲಿ ಶಾಂತಿ ಒಪ್ಪಂದಕ್ಕೆ ಸಹಿ ಹಾಕಲಾಗುವುದು. ಒಪ್ಪಂದಕ್ಕೆ ಅಧಿಕೃತವಾಗಿ ಸಹಿ ಹಾಕಿದ ನಂತರ ಶುಕ್ರವಾರ ಹಾರ್ಮುಜ್ ಜಲಸಂಧಿ ತೆರೆಯಲಾಗುವುದು. ಈ

ಒಪ್ಪಂದವು ಇಡೀ ಪ್ರದೇಶಕ್ಕೆ ಶಾಂತಿ ಮತ್ತು ಭದ್ರತೆಯನ್ನು ತರುತ್ತದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದರು. ೬೦ ದಿನಗಳ ಅವಧಿಯಲ್ಲಿ ಇರಾನ್‌ನ ಪರಮಾಣು ಪುಷ್ಟೀಕರಣ ಮತ್ತು ಯುರೇನಿಯಂ ವಿಲೇವಾರಿ ಕುರಿತು ಅಮೆರಿಕ ಮತ್ತು ಇರಾನ್ ಮಾತುಕತೆ ನಡೆಸಬೇಕೆಂದು ಒಪ್ಪಂದದಲ್ಲಿ ಉಲ್ಲೇಖಿಸಲಾಗಿದೆ. ಲೆಬನಾನ್ ಸೇರಿದಂತೆ ಎಲ್ಲಾ ಸಂಘಟನೆಗಳು ಮತ್ತು ಪ್ರದೇಶಗಳಲ್ಲಿ ಯುದ್ಧ ಮತ್ತು ಮಿಲಿಟರಿ ಕಾರ್ಯಾಚರಣೆಗಳು ಇಂದು ರಾತ್ರಿಯಿಂದ ಶಾಶ್ವತವಾಗಿ ಕೊನೆಗೊಳ್ಳುತ್ತವೆ ಎಂದು ಇರಾನ್‌ನ ಉನ್ನತ ರಾಷ್ಟ್ರೀಯ ಭದ್ರತಾ ಮಂಡಳಿ ಹೇಳಿದೆ. ಈ ಸುದ್ದಿಯ ಬೆನ್ನಲ್ಲೇ ತೈಲ ಬೆಲೆಗಳು ಕುಸಿದಿವೆ. ಬ್ರೆಂಟ್ ಕಚ್ಚಾ ತೈಲ ಇಂದು ಆರಂಭಿಕ ವಹಿವಾಟಿನಲ್ಲಿ ಶೇಕಡಾ ೪ ರಷ್ಟು ಕುಸಿದರೆ, ಯುಎಸ್ ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ ಶೇಕಡಾ ೪.೬ ಕ್ಕಿಂತ ಹೆಚ್ಚು ಕುಸಿದಿದೆ. ಏಷ್ಯಾದಲ್ಲಿ ಷೇರು ಮಾರುಕಟ್ಟೆಗಳು ಜಿಗಿದಿವೆ.

<><><><>

ಟಿಎಂಸಿ ಪಕ್ಷದ ಶಾಸಕರ ಸಹಿ ನಕಲು ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಅಪರಾಧ ತನಿಖಾ ದಳ-ಸಿಐಡಿ, ತೃಣಮೂಲ ಕಾಂಗ್ರೆಸ್ ಸಂಸದ ಅಭಿಷೇಕ್ ಬ್ಯಾನರ್ಜಿ ಅವರನ್ನು ಒಂಬತ್ತು ಗಂಟೆಗಳಿಗೂ ಹೆಚ್ಚು ಕಾಲ ವಿಚಾರಣೆ ನಡೆಸಿತು. ಮೂಲಗಳ ಪ್ರಕಾರ, ಸಿಐಡಿ ಅಧಿಕಾರಿಗಳು ನಿನ್ನೆ ಕೋಲ್ಕತ್ತಾದ ಭಬಾನಿ ಭವನದಲ್ಲಿ ತೃಣಮೂಲ ಕಾಂಗ್ರೆಸ್ ಶಾಸಕ ಕುನಾಲ್ ಘೋಷ್ ಮತ್ತು ಅಭಿಷೇಕ್ ಬ್ಯಾನರ್ಜಿ ಅವರನ್ನು ವಿಚಾರಣೆ ನಡೆಸಿದ್ದಾರೆ.

<><><><>

ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಉದ್ಘಾಟನಾ ಪಂದ್ಯದಲ್ಲಿ ಭಾರತ ತಂಡ, ನಿನ್ನೆ ರಾತ್ರಿ ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ನಡೆದ 'ಎ' ಗುಂಪಿನ ಪಂದ್ಯದಲ್ಲಿ ಪಾಕಿಸ್ತಾನವನ್ನು ೬೪ ರನ್‌ಗಳಿಂದ ಪರಾಭವಗೊಳಿಸಿದೆ. ಭಾರತ ತಂಡ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನಕ್ಕೆ ೧೭೧ ರನ್‌ಗಳ ಗುರಿ ನೀಡಿತು. ಇದಕ್ಕೆ ಉತ್ತರವಾಗಿ ಪಾಕಿಸ್ತಾನ ೧೭ ಓವರ್‌ಗಳಲ್ಲಿ ೧೦೬ ರನ್‌ಗಳಿಗೆ ಆಲೌಟ್ ಆಯಿತು. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ಆರು ವಿಕೆಟ್‌ಗಳಿಗೆ ೧೭೦ ರನ್ ಗಳಿಸಿತು. ಸ್ಮೃತಿ ಮಂಧಾನ ೪೪ ಎಸೆತಗಳಲ್ಲಿ ೬೮ ರನ್ ಗಳಿಸಿದರು. ಭಾರತದ ಪರ ಐದು ವಿಕೆಟ್ ಕಬಳಿಸಿದ ದೀಪ್ತಿ ಶರ್ಮಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ದಿನದ ಇನ್ನೊಂದು ಪಂದ್ಯದಲ್ಲಿ ಬಾಂಗ್ಲಾದೇಶ, ನೆದರ್ಲೆಂಡ್ಸ್ ವಿರುದ್ಧ ಆರು ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತು. ಬ್ಯಾಟಿಂಗ್ ಆಯ್ಕೆ

ಮಾಡಿಕೊಂಡ ನೆದರ್ಲೆಂಡ್ ನಿಗದಿತ ೨೦ ಓವರ್‌ಗಳಲ್ಲಿ ಎಂಟು ವಿಕೆಟ್‌ಗಳಿಗೆ ೧೩೮ ರನ್ ಗಳಿಸಿತು. ಇದಕ್ಕೆ ಪ್ರತಿಯಾಗಿ ಬಾಂಗ್ಲಾದೇಶ ೧೯.೧ ಓವರ್‌ಗಳಲ್ಲಿ ೪ ವಿಕೆಟ್‌ಗಳಿಗೆ ೧೪೧ ರನ್ ಗಳಿಸುವ ಮೂಲಕ ಗುರಿ ತಲುಪಿತು.

<><><><>

ಹೂಸ್ಟನ್‌ನಲ್ಲಿ ನಿನ್ನೆ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯದಲ್ಲಿ ಜರ್ಮನಿ ತಂಡ, ಕ್ಯುರಾಕೊ ತಂಡವನ್ನು ೭-೧ ಅಂತರದಿಂದ ಸೋಲಿಸಿತು. ಟೆಕ್ಸಾಸ್‌ನ ಡಲ್ಲಾಸ್ ಕ್ರೀಡಾಂಗಣದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ಜಪಾನ್ ಮತ್ತು ನೆದರ್ಲ್ಯಾಂಡ್ಸ್ ತಂಡಗಳು ೨-೨ ಗೋಲುಗಳಿಂದ ಡ್ರಾ ಸಾಧಿಸಿದವು. ಇಂದು, ಮೆಕ್ಸಿಕೋದ ಮಾಂಟೆರ್ರಿ ಕ್ರೀಡಾಂಗಣದಲ್ಲಿ ನಡೆಯುವ 'ಎಫ್' ಗುಂಪಿನ ಪಂದ್ಯದಲ್ಲಿ ಟುನೀಶಿಯಾ ಮತ್ತು ಸ್ವೀಡನ್ ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ. ಇಂದಿನ ಮತ್ತೊಂದು ಪಂದ್ಯದಲ್ಲಿ, ಅಮೆರಿಕದ ಅಟ್ಲಾಂಟಾ ಕ್ರೀಡಾಂಗಣದಲ್ಲಿ ನಡೆಯುವ 'ಎಚ್' ಗುಂಪಿನ ಪಂದ್ಯದಲ್ಲಿ ಸ್ಪೇನ್ ತಂಡ, ಕ್ಯಾಬೊ ವರ್ಡೆ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೩೦ ಕ್ಕೆ ಆರಂಭವಾಗಲಿದೆ.

<><><><>

ಉತ್ತರ ಪ್ರದೇಶದ ಗೌತಮ್ ಬುದ್ಧ ನಗರದ ಜೇವರ್‌ನಲ್ಲಿರುವ ನೋಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಾಣಿಜ್ಯ ವಿಮಾನ ಸೇವೆಗಳು ಇಂದು ಪ್ರಾರಂಭವಾಗಿದೆ. ಇಂಡಿಗೋ ಏರ್‌ಲೈನ್ಸ್‌ನ ಮೊದಲ ವಿಮಾನವು ಲಕ್ನೋದಿಂದ ಬೆಳಗ್ಗೆ ೭:೦೫ ಕ್ಕೆ ಪ್ರಯಾಣ ಆರಂಭಿಸಿದ್ದು, ಬೆಳಗ್ಗೆ ೮:೦೫ ಕ್ಕೆ ನೋಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಲಿದೆ. ಇದರ ನಂತರ, ನೋಯ್ಡಾದಿಂದ ಬೆಂಗಳೂರಿಗೆ ಮೊದಲ ನಿಯಮಿತ ವಾಣಿಜ್ಯ ವಿಮಾನವು ಕಾರ್ಯಾಚರಣೆಯನ್ನು ಪ್ರಾರಂಭಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>